**All India Radio: Bangalore**
**National Bulletin In Kannada**
**15.11.2025 19.35 p.m.**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**15.11.2025 19.35 p.m.**

***************

ಮುಖ್ಯಾಂಶಗಳು

೧. ಗುಜರಾತ್‌ನಲ್ಲಿಂದು ೯ ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ದೇಶಾದ್ಯಂತ ಇಂದು ಜನಜಾತೀಯ ಗೌರವ ದಿವಸ್ ಆಚರಣೆ

೩. ಫ್ರಾನ್ಸ್‌ನಲ್ಲಿ ನಾಳೆಯಿಂದ ನಡೆಯುವ ಗರುಡ-೨೫ ಸಮರಾಭ್ಯಾಸದಲ್ಲಿ ಭಾರತೀಯ ವಾಯುಪಡೆ ಭಾಗಿ

೪. ಶೂಟಿಂಗ್ ವಿಶ್ವಚಾಂಪಿಯನ್‌ಶಿಪ್; ಮಹಿಳೆಯರ ೨೫ ಮೀಟರ್ ಪಿಸ್ತೂಲು ವಿಭಾಗದಲ್ಲಿ ಭಾರತದ ಇಶಾ ಸಿಂಗ್‌ಗೆ ಕಂಚು

೫. ಟೆಸ್ಟ್ ಕ್ರಿಕೆಟ್; ದಕ್ಷಿಣ ಆಫ್ರಿಕಾ ವಿರುದ್ಧ ಮೊದಲ ಇನ್ನಿಂಗ್ಸ್‌ನಲ್ಲಿ ೧೮೯ ರನ್ ಗಳಿಸಿದ ಭಾರತ

***************

ಗುಜರಾತ್‌ನ ಬುಡಕಟ್ಟು ಪ್ರಾಬಲ್ಯದ ನರ್ಮದಾ ಜಿಲ್ಲೆಯ ದೇಡಿಯಾಪದ ಪಟ್ಟಣದಲ್ಲಿಂದು ೯ ಸಾವಿರದ ೭೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿ, ಶಿಲಾನ್ಯಾಸ ನೇರವೇರಿಸಿದರು.

ಈ ಯೋಜನೆಗಳು ಮೂಲಸೌಕರ್ಯ, ಆರೋಗ್ಯ, ಶಿಕ್ಷಣ ಮತ್ತು ಪರಂಪರೆಯ ಮೇಲೆ ಕೇಂದ್ರೀಕರಿಸುತ್ತವೆ. ವಿಶೇಷವಾಗಿ ಬುಡಕಟ್ಟು ಸಬಲೀಕರಣಕ್ಕೆ ಒತ್ತು ನೀಡುತ್ತವೆ. ಬುಡಕಟ್ಟು ನಾಯಕ ಮತ್ತು ಸ್ವಾತಂತ್ರ್ಯ ಹೋರಾಟಗಾರ ಭಗವಾನ್ ಬಿರ್ಸಾ ಮುಂಡಾ ಅವರ ೧೫೦ನೇ ಜನ್ಮ ದಿನಾಚರಣೆಯ ಗುರುತಿಸುವ ಜನ ಜಾತಿಯ ಗೌರವ ದಿವಸ್ ಸಂದರ್ಭದಲ್ಲಿ ಈ ಯೋಜನೆಗಳನ್ನು ಪ್ರಾರಂಭಿಸಲಾಗಿದೆ.

ಈ ವೇಳೆ, ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬುಡಕಟ್ಟು ಸಮುದಾಯವು ಸಾವಿರಾರು ವರ್ಷಗಳಿಂದ ಭಾರತದ ಪ್ರಜ್ಞೆಯ ಅವಿಭಾಜ್ಯ ಅಂಗವಾಗಿದೆ. ದೇಶದ ಗೌರವ, ಸ್ವಾಭಿಮಾನ ಮತ್ತು ಸ್ವ-ಆಡಳಿತದ ಪ್ರಶ್ನೆ ಉದ್ಭವಿಸಿದಾಗಲೆಲ್ಲ, ಭಾರತದ ಬುಡಕಟ್ಟು ಸಮುದಾಯ ಮುಂಚೂಣಿಯಲ್ಲಿದೆ. ಸ್ವಾತಂತ್ರ್ಯ ಚಳವಳಿಯಲ್ಲಿ ಬುಡಕಟ್ಟು ಸಮಾಜದ ಕೊಡುಗೆಯನ್ನು ದೇಶ ಎಂದೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದರು.

ಶ್ರೀಗೋವಿಂದ್ ಗುರು ಚೇರ್ ಬುಡಕಟ್ಟು ಭಾಷಾ ಪ್ರಚಾರ ಕೇಂದ್ರವನ್ನು ಇಂದು ಸ್ಥಾಪಿಸಲಾಗಿದೆ. ಇಲ್ಲಿ ಎಲ್ಲ ಬುಡಕಟ್ಟುಗಳ ಉಪಭಾಷೆಗಳ ಕುರಿತು ಅಧ್ಯಯನ ನಡೆಸಲಾಗುವುದು ಎಂದು ಪ್ರಧಾನಿ ಮೋದಿ ತಿಳಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ

ಇದಕ್ಕೂ ಮುನ್ನ ಸೂರತ್‌ನಲ್ಲಿ ನಿರ್ಮಾಣ ಹಂತದಲ್ಲಿರುವ ಬುಲೆಟ್ ರೈಲು ನಿಲ್ದಾಣಕ್ಕೆ ಭೇಟಿ ನೀಡಿ, ಮುಂಬೈ-ಅಹಮದಾಬಾದ್ ಅತಿ ವೇಗದ ರೈಲು ಕಾರಿಡಾರ್‌ನ ಪ್ರಗತಿ ಪರಿಶೀಲನೆ ನಡೆಸಿದರು.

ಈ ವೇಳೆ ಅವರು, ಅಧಿಕಾರಿಗಳೊಂದಿಗೆ ಸಂವಾದ ನಡೆಸಿದರು. ಈ ಕಾರಿಡಾರ್ ಭಾರತದ ಮಹತ್ವಾಕಾಂಕ್ಷಿ ಮೂಲಸೌಕರ್ಯ ಯೋಜನೆಗಳಲ್ಲಿ ಒಂದಾಗಿದ್ದು,

ಗುಜರಾತ್, ದಾದ್ರಾ ಮತ್ತು ನಗರ್ ಹವೇಲಿಯಲ್ಲಿ ಸುಮಾರು ೩೫೨ ಕಿಲೋಮೀಟರ್ ಹಾಗೂ ಮಹಾರಾಷ್ಟ್ರದ ೧೫೬ ಕಿಲೋಮೀಟರ್ ಪ್ರದೇಶದಲ್ಲಿ ವ್ಯಾಪಿಸಿದೆ. ಈ ಕಾರಿಡಾರ್, ಸಬರಮತಿ, ಅಹಮದಾಬಾದ್, ಆನಂದ್, ವಡೋದರಾ, ಬರೂಚ್, ಸೂರತ್, ಥಾಣೆ, ಮುಂಬೈ ಸೇರಿದಂತೆ ಹಲವು ಪ್ರಮುಖ ನಗರಗಳಿಗೆ ಸಂಪರ್ಕ ಒದಗಿಸಲಿದೆ.

***************

ಸ್ವಾತಂತ್ರ್ಯ ಹೋರಾಟಗಾರ ಮತ್ತು ಬುಡಕಟ್ಟು ನಾಯಕ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮ ದಿನಾಚರಣೆಯ ಸ್ಮರಣಾರ್ಥ ಇಂದು ದೇಶಾದ್ಯಂತ ಜನ್‌ಜಾತಿಯ ಗೌರವ ದಿವಸ್ ಆಚರಿಸಲಾಗುತ್ತಿದೆ.

ಬುಡಕಟ್ಟು ಇತಿಹಾಸವನ್ನು ಜೀವಂತವಾಗಿಡುವ ಮಹತ್ವವನ್ನು ಗುರುತಿಸಿ, ಕೇಂದ್ರ ಸರ್ಕಾರ, ನವೆಂಬರ್ ೧೫ ಅನ್ನು ಜನಜಾತಿಯ ಗೌರವ ದಿವಸ್ ಎಂದು ಆಚರಿಸುತ್ತಿದೆ. ಈ ಆಚರಣೆಯನ್ನು ಜನಜಾತಿಯ ಗೌರವ ಸಪ್ತಾಹದ ಭಾಗವಾಗಿ ಬುಡಕಟ್ಟು ಸಮುದಾಯದ ಮಹಾನ್ ವ್ಯಕ್ತಿಗಳ ಪರಂಪರೆಯನ್ನು ಮುನ್ನೆಲೆಗೆ ತರುವ ಸಾಂಸ್ಕೃತಿಕ ಕಾರ್ಯಕ್ರಮಗಳು, ಪ್ರದರ್ಶನಗಳು ಮತ್ತು ಶೈಕ್ಷಣಿಕ ಚಟುವಟಿಕೆಗಳೊಂದಿಗೆ ಆಚರಿಸಲಾಗುತ್ತಿದೆ.

ನವದೆಹಲಿಯ ಸಂಸತ್ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಭಗವಾನ್ ಬಿರ್ಸಾ ಮುಂಡಾ ಅವರಿಗೆ ಪುಷ್ಪನಮನ ಸಲ್ಲಿಸಿದರು.

ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ, ಭಗವಾನ್ ಬಿರ್ಸಾ ಮುಂಡಾ ಅವರು ಹೊತ್ತಿಸಿದ ರಾಷ್ಟ್ರೀಯತೆಯ ಜ್ವಾಲೆ ಪೀಳಿಗೆಗಳಾದ್ಯಂತ ಉರಿಯುತ್ತಿರಲಿದೆ.

ಅವರ ಮತ್ತು ಇತರ ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರ ಪರಂಪರೆ ಸದಾ ಸ್ಮರಣೀಯ ಎಂದಿದ್ದಾರೆ.

ಲೋಕಸಭಾಧ್ಯಕ್ಷ, ರಾಷ್ಟ್ರೀಯ ಹಿತಾಸಕ್ತಿ, ಬುಡಕಟ್ಟು ಏಳಿಗೆ ಮತ್ತು ಸ್ವಾಭಿಮಾನಕ್ಕಾಗಿ ಬಿರ್ಸಾ ಮುಂಡಾ ಅವರ ಅಸಮಾನ್ಯ ಹೋರಾಟ ಎಲ್ಲರಿಗೂ ಸ್ಫೂರ್ತಿದಾಯಕವಾಗಿದೆ ಎಂದಿದ್ದಾರೆ.

ಬುಡಕಟ್ಟು ಸ್ವಾತಂತ್ರ್ಯ ಹೋರಾಟಗಾರರಿಗೆ ಮೀಸಲಾಗಿರುವ ವಸ್ತುಸಂಗ್ರಹಾಲಯಗಳು ಮತ್ತು ಸ್ಮಾರಕಗಳ ಅಭಿವೃದ್ಧಿಗೆ ಸರ್ಕಾರ ನಿರಂತರವಾಗಿ ಒತ್ತು ನೀಡಿದೆ.

ಹತ್ತು ರಾಜ್ಯಗಳಲ್ಲಿ ಹನ್ನೊಂದು ವಸ್ತುಸಂಗ್ರಹಾಲಯಗಳಿಗೆ ಅನುಮೋದನೆ ನೀಡಲಾಗಿದೆ. ಇದಲ್ಲದೆ, ರಾಣಿ ಕಮಲಾಪತಿ ರೈಲು ನಿಲ್ದಾಣ, ತಾಂತ್ಯ ಭಿಲ್ ವಿಶ್ವವಿದ್ಯಾಲಯ ಮತ್ತು ಅಲ್ಲೂರಿ ಸೀತಾರಾಮ ರಾಜು ಮತ್ತು ಬಿರ್ಸಾ ಮುಂಡಾ ಅವರ ಪ್ರತಿಮೆಗಳಂತಹ ಸಾರ್ವಜನಿಕ ಸ್ಥಳಗಳು ದೇಶಾದ್ಯಂತ ಬುಡಕಟ್ಟು ಪರಂಪರೆಯನ್ನು ಪ್ರಚುರಪಡಿಸುವ ನಿರಂತರ ಪ್ರಯತ್ನವನ್ನು ಪ್ರತಿಬಿಂಬಿಸುತ್ತವೆ.

***************

ಭಾರತೀಯ ವಾಯುಪಡೆ ನಾಳೆಯಿಂದ ಫ್ರಾನ್ಸ್‌ನಲ್ಲಿ ನಡೆಯಲಿರುವ ಲನೇ ದ್ವಿಪಕ್ಷೀಯ ವಾಯು ಸಮಾರಾಭ್ಯಾಸ-ಗರುಡ ೨೫ ರಲ್ಲಿ ಭಾಗವಹಿಸಲಿದೆ.

ಈ ಸಮಾರಾಭ್ಯಾಸವು ಇದೇ ೨೭ರವರೆಗೆ ನಡೆಯಲಿದ್ದು, ಫ್ರಾನ್ಸ್‌ನ ಫ್ರೆಂಚ್ ವಾಯು ಮತ್ತು ಬಾಹ್ಯಾಕಾಶ ಪಡೆ ಇದರಲ್ಲಿ ಭಾಗವಹಿಸಲಿದೆ.

ಸಮಾರಾಭ್ಯಾಸದ ಸಮಯದಲ್ಲಿ ಐಎಎಫ್‌ನ ಸು-೩೦ಎಂಕೆಐ ವಿಮಾನವು ಫ್ರಾನ್ಸ್‌ನ ಯುದ್ಧ ವಿಮಾನಗಳೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಲಿದೆ. ಯುದ್ಧ ಸನ್ನಿವೇಶಗಳಲ್ಲಿ ಹೇಗೆ ಕಾರ್ಯನಿರ್ವಹಿಸುವುದು ಹಾಗೂ ವಾಯು ರಕ್ಷಣೆ ಮತ್ತು ಜಂಟಿ ಕಾರ್ಯಾಚರಣೆಗಳ ಸಮಯದಲ್ಲಿ ಕಾರ್ಯಕ್ಷಮತೆಯ ಮೇಲೆ ಈ ಸಮಾರಾಭ್ಯಾಸ ಕೇಂದ್ರೀಕರಿಸುತ್ತದೆ.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ಅಮೆರಿಕಾದಲ್ಲಿರುವ ಭಾರತೀಯ ಕಾನ್ಸುಲ್ ಜನರಲ್‌ಗಳ ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು.

ನ್ಯೂಯಾರ್ಕ್‌ನಲ್ಲಿ ನಡೆದ ಈ ಸಭೆಯಲ್ಲಿ ವಾಷಿಂಗ್ಟನ್ ಡಿಸಿಯಲ್ಲಿರುವ ಭಾರತೀಯ ರಾಯಭಾರ ಕಚೇರಿ ಹಾಗೂ ನ್ಯೂಯಾರ್ಕ್, ಸ್ಯಾನ್‌ಫ್ರಾನ್ಸಿಸ್ಕೊ, ಚಿಕಾಗೊ, ಅಟ್ಲಾಂಟಾ, ಹೂಸ್ಟಾನ್, ಬೋಸ್ಟನ್, ಲಾಸ್ ಏಂಜಲೀಸ್ ಮತ್ತು ಸಿಯಾಟಲ್‌ನಲ್ಲಿರುವ ಕಾನ್ಸುಲೇಟ್ ಕಚೇರಿಗಳ ಹಿರಿಯ ರಾಜತಾಂತ್ರಿಕರು ಭಾಗವಹಿಸಿದ್ದರು.

ಭಾರತ-ಅಮೆರಿಕಾ ಪಾಲುದಾರಿಕೆಯನ್ನು ಬಲಪಡಿಸಲು ನಮ್ಮ ರಾಯಭಾರ ಕಚೇರಿಗಳು ಮತ್ತು ಭೂತವಾಸ ಕಚೇರಿಗಳ ಪದ್ಧತಿ ಮತ್ತು ಪ್ರಯತ್ನಗಳನ್ನು ಶ್ಲಾಘಿಸುತ್ತೇನೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

***************

ಅಮೃತ್ ಉಪಕ್ರಮವು ಇಂದು ೧೦ ವರ್ಷಗಳನ್ನು ಪೂರೈಸಿದೆ. ನವದೆಹಲಿಯಲ್ಲಿಂದು ನಡೆದ ಅಮೃತ್ ಉಪಕ್ರಮದ ೧೦ನೇ ವಾರ್ಷಿಕೋತ್ಸವ ಉದ್ದೇಶಿಸಿ ಮಾತನಾಡಿದ

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ.ನಡ್ಡಾ ಕಳೆದ ೧೦ ವರ್ಷಗಳಲ್ಲಿ ಈ ಕಾರ್ಯಕ್ರಮವು ರೋಗಿಗಳಿಗೆ ಸುಮಾರು ೮ ಸಾವಿರದ ೫೦೦ ಕೋಟಿ ರೂಪಾಯಿ ಉಳಿತಾಯ ಮಾಡಲು ಸಹಾಯ ಮಾಡಿದೆ ಎಂದು ಹೇಳಿದರು.

ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ೨೫೫ ಅಮೃತ್ ಔಷಧಾಲಯಗಳಿವೆ. ಶೇಕಡ ೫೦ ರಷ್ಟು ಪ್ರತಿಶತದಷ್ಟು ಔಷಧಗಳು, ಶಸ್ತ್ರ ಚಿಕಿತ್ಸಾ ಉಪಕರಣಗಳು ಸೇರಿದಂತೆ ೬ ಸಾವಿರದ ೫೦೦ಕ್ಕೂ ಹೆಚ್ಚು ಉತ್ಪನ್ನಗಳನ್ನು ಇಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದರು.

ಇದೇ ವೇಳೆ, ದೇಶಾದ್ಯಂತ ೧೦ ನೂತನ ಅಮೃತ್ ಮಳಿಗೆಗಳನ್ನು ಸಚಿವ ಜೆ.ಪಿ.ನಡ್ಡಾ ಉದ್ಘಾಟಿಸಿದರು. ದೇಶಾದ್ಯಂತ ಈ ಮಳಿಗೆಗಳ ಸಂಖ್ಯೆಯನ್ನು ೫೦೦ಕ್ಕೆ ಏರಿಕೆ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

***************

ದೇಶದ ಬಂಡವಾಳ ಮಾರುಕಟ್ಟೆಗಳಲ್ಲಿ ಭಾರತೀಯ ಹೂಡಿಕೆದಾರರಿಗೆ ವಿಶ್ವಾಸ ಹೆಚ್ಚುತ್ತಿದೆ ಎಂದು ಭಾರತೀಯ ಷೇರುಪೇಟೆ ಮತ್ತು ವಿನಿಮಯ ಮಂಡಳಿ-ಸೆಬಿ ಅಧ್ಯಕ್ಷ ತುಹಿನ್ ಕಾಂತ ಪಾಂಡೆ ಹೇಳಿದ್ದಾರೆ.

ನವದೆಹಲಿಯಲ್ಲಿ ನಡೆದ ಇಂಡಿಯಾ ಇಂಟರ್ ನ್ಯಾಷನಲ್ ಟ್ರೇಡ್ ಫೇರ್ ಉದ್ದೇಶಿಸಿ ಮಾತನಾಡಿದ ಅವರು, ೨೦೨೫ರ ಅಕ್ಟೋಬರ್ ಹೊತ್ತಿಗೆ ಭಾರತದಲ್ಲಿ ಸುಮಾರು ೧೩.೬ ಕೋಟಿ ಹೂಡಿಕೆದಾರರು ೨೧ ಕೋಟಿಗೂ ಹೆಚ್ಚು ಡಿಮ್ಯಾಟ್ ಖಾತೆಗಳನ್ನು ಹೊಂದಿದ್ದಾರೆ. ಇದು ಮಾರುಕಟ್ಟೆಯಲ್ಲಿ ಬಲವಾದ ನಂಬಿಕೆಯನ್ನು ಸೂಚಿಸುತ್ತದೆ ಎಂದು ತಿಳಿಸಿದರು.

***************

ಕೈರೋದಲ್ಲಿಂದು ನಡೆದ ಶೂಟಿಂಗ್ ವಿಶ್ವ ಚಾಂಪಿಯನ್‌ಶಿಪ್‌ನ ಮಹಿಳೆಯರ ೨೫ ಮೀಟರ್ ಪಿಸ್ತೂಲ್ ವಿಭಾಗದಲ್ಲಿ ಭಾರತದ ಶೂಟರ್ ಇಶಾ ಸಿಂಗ್ ಕಂಚಿನ ಪದಕ ಗೆದ್ದಿದ್ದಾರೆ. ಇದು ಅವರ ಚೊಚ್ಚಲ ವೈಯಕ್ತಿಕ ವಿಶ್ವ ಚಾಂಪಿಯನ್‌ಶಿಪ್ ಪದಕವಾಗಿದೆ.

ಫೈನಲ್‌ನಲ್ಲಿ ಇಶಾ ೩೦ ಅಂಕಗಳನ್ನು ಗಳಿಸಿ, ತೃತೀಯ ಸ್ಥಾನಪಡೆದರೆ, ಚೀನಾದ ಯಾವೊ ಬೆಳ್ಳಿ ಪದಕ ಗೆದ್ದರು.

***************

ಕೊಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಟೆಸ್ಟ್ ಕ್ರಿಕೆಟ್ ಸರಣಿಯ ಮೊದಲ ಪಂದ್ಯದ ಎರಡನೇ ದಿನದಾಟದಲ್ಲಿಂದು ಭಾರತ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೮೯ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು.

ಎರಡನೇ ಇನ್ನಿಂಗ್ಸ್ ಆರಂಭಿಸಿರುವ ದಕ್ಷಿಣ ಆಫ್ರಿಕಾ ದಿನದಾಟದ ಅಂತ್ಯಕ್ಕೆ ೭ ವಿಕೆಟ್‌ಗಳಿಗೆ ೯೩ ರನ್ ಗಳಿಸಿದೆ. ನಾಳೆ ಮೂರನೇ ದಿನದಾಟ ಮುಂದುವರೆಯಲಿದೆ. ದಕ್ಷಿಣ ಆಫ್ರಿಕಾ ತಂಡ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ೧೫೯ ರನ್ ಗಳಿಸಿದೆ.

******* ಮುಕ್ತಾಯ *******